# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಗುರುವಾರ: 18–06–2026

EMAIL : dairyadadaari@gmail.com ಸಂಪುಟ: 01 ಸಂಚಿಕೆ: 174

ಬೆಲೆ ರೂ : 2.00

ರಾಯಚೂರು

ಪುಟ: 4


# ‘ಚಿನ್ನಯ್ಯ ಹೇಳಿಕೆಗೆ ನನಗೂ ಸಂಬಂಧವಿಲ್ಲ, ತನಿಖೆಯಾಗಲಿ: ನಟ ಪ್ರಕಾಶ್ ರಾಜ್

**ಬೆಂಗಳೂರು.ಜೂ17:** ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಆರೋಪಗಳು ಹಾಗೂ ‘ಚಿನ್ನಯ್ಯ’ ಎಂಬಾತ ನೀಡಿರುವ ಹೇಳಿಕೆಗಳಿಗೂ ತನಗೂ ಯಾವುದೇ ಸಂಬಂಧವಿಲ್ಲ ಎಂದು ಬಹುಭಾಷಾ ನಟ ಪ್ರಕಾಶ್ ರಾಜ್ ಸ್ಪಷ್ಟಪಡಿಸಿದ್ದಾರೆ.

ನಗರದ ಪ್ರೆಸ್ ಕ್ಲಬ್‌ನಲ್ಲಿ ತುರ್ತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಅನಾವಶ್ಯಕವಾಗಿ ತಮ್ಮ ಹೆಸರನ್ನು ಎಳೆದು ತರಲಾಗುತ್ತಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

“ಕೇರಳದಿಂದ ಧರ್ಮಸ್ಥಳದ ಹೆಸರು ಹಾಳು ಮಾಡಲು 200 ಕೋಟಿ ರೂಪಾಯಿ ಬಂದಿದೆ ಎಂದು ಚಿನ್ನಯ್ಯ ಎಂಬಾತ ಹೇಳಿಕೊಂಡಿದ್ದಾನೆ. ಅದರಲ್ಲಿ ನನ್ನ ಹೆಸರನ್ನೂ ಬಳಸಿದ್ದಾನೆ. ಆದರೆ ನಾನು ಧರ್ಮಸ್ಥಳಕ್ಕೆ ಎಂದೂ ಹೋದವನಲ್ಲ, ಅಲ್ಲಿ ಯಾರನ್ನೂ ಭೇಟಿ ಮಾಡಿದವನಲ್ಲ” ಎಂದು ಪ್ರಕಾಶ್ ರಾಜ್ ತಿಳಿಸಿದರು.

ಈ ಹಿಂದೆ ಗಿರೀಶ್ ಮಟ್ಟಣ್ಣನವರ್ ಅವರು ನನಗೆ ಕರೆ ಮಾಡಿ, ’ಮಾಸ್ಕ್ ಮ್ಯಾನ್’ ಒಬ್ಬರು ನಿಮ್ಮೊಂದಿಗೆ ಮಾತನಾಡಬೇಕು ಎನ್ನುತ್ತಿದ್ದಾರೆ ಎಂದಿದ್ದರು. ಆ ವ್ಯಕ್ತಿ ಮಂಡ್ಯದವನು ಎಂದು ಹೇಳಲಾಯಿತಾದರೂ, ನನ್ನೊಂದಿಗೆ ತಮಿಳಿನಲ್ಲಿ ಮಾತನಾಡಿದ. ಆತ ನನ್ನನ್ನು ಭೇಟಿ ಮಾಡಲು ಬಯಸಿದಾಗ ನಾನು ನಿರಾಕರಿಸಿ, ಧ್ವನಿ ಸಂದೇಶ ಕಳುಹಿಸಲು ಹೇಳಿದೆ. ಆ ಆಡಿಯೋ ಬಂದ ತಕ್ಷಣ ನಾನು ಅದನ್ನು ಎಸ್‌ಐಟಿ ಅಧಿಕಾರಿ ಮೊಹಾಂತಿ ಅವರಿಗೆ



ಹಸ್ತಾಂತರಿಸಿದ್ದೆ. ಚಿನ್ನಯ್ಯ ಇಡೀ ಕರ್ನಾಟಕದ ಜನತೆಗೆ ಚಳ್ಳೆಹಣ್ಣು ತಿನ್ನಿಸುತ್ತಿದ್ದಾನೆ” ಎಂದು ನಟ ಆರೋಪಿಸಿದರು. ಧರ್ಮಸ್ಥಳ ಪ್ರಕರಣದ ಬಗ್ಗೆ ನಿಷ್ಪಕ್ಷಪಾತ ತನಿಖೆಯಾಗಬೇಕು ಎಂದು ತಾವೇ ಖುದ್ದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಎಸ್‌ಐಟಿ ರಚನೆಗೆ ಒತ್ತಾಯಿಸಿದ್ದಾಗಿ ಪ್ರಕಾಶ್ ರಾಜ್ ನೆನಪಿಸಿಕೊಂಡರು. ಸರ್ಕಾರ ಕೂಡ ಒಬ್ಬ ದಕ್ಷ ಅಧಿಕಾರಿಯನ್ನು ನೇಮಕ ಮಾಡಿದೆ. ತನಿಖೆಗೆ ಕರೆಯ ಬಂದಾಗ ಆ ವ್ಯಕ್ತಿ (ಮಾಸ್ಕ್ ಮ್ಯಾನ್) ತನಗೆ ಧೈರ್ಯವಿಲ್ಲ ಎಂದು ಹಿಂದೆ ಸರಿದಿದ್ದ ಎಂದು ಅವರು ವಿವರಿಸಿದರು.

**ಪ್ರೆಸ್ ಕ್ಲಬ್‌ನಲ್ಲಿ ಹೈಡ್ರಾಮಾ: ಪತ್ರಕರ್ತರ ತರಾಟೆ**

ಸುದ್ದಿಗೋಷ್ಠಿಯ ನಡುವೆ ಪ್ರಕಾಶ್ ರಾಜ್ ಅವರು ಬಳಸಿದ ’ಮಾರಿಕೊಂಡ ಮಾಧ್ಯಮ’ ಎಂಬ ಪದಪ್ರಯೋಗ ಪತ್ರಕರ್ತರ ತೀವ್ರ ಆಕ್ರೋಶಕ್ಕೆ ಕಾರಣವಾಯಿತು. ಉಪಸ್ಥಿತರಿದ್ದ ಪತ್ರಕರ್ತರು ನಟನನ್ನು ತರಾಟೆಗೆ ತೆಗೆದುಕೊಂಡರು. ಪರಿಸ್ಥಿತಿ ಕೈಮೀರುತ್ತಿದ್ದಂತೆ ಸ್ಪಷ್ಟನೆ ನೀಡಿದ ಪ್ರಕಾಶ್ ರಾಜ್, “ನಾನು ಎಲ್ಲ ಮಾಧ್ಯಮಗಳನ್ನೂ ಮಾರಿಕೊಂಡ ಮಾಧ್ಯಮ ಎಂದು ಕರೆದಿಲ್ಲ. ಕೆಲವು ಮಾಧ್ಯಮಗಳು ಮೊದಲೇ ಜಡ್ಜ್‌ಮೆಂಟ್ ಕೊಟ್ಟು ಸುದ್ದಿ ಬಿಂಬಿಸುತ್ತಿವೆ” ಎಂದು ಸಮರ್ಥಿಸಿಕೊಂಡರು.

“ನಾನು ಯಾವುದೇ ದೇವಸ್ಥಾನಕ್ಕೆ ಹೋಗುವುದಿಲ್ಲ. ಆದರೆ ನನ್ನ ಪತ್ನಿ ಹೋಗುತ್ತಾಳೆ. ಅದು ಅವರವರ ನಂಬಿಕೆ ಮತ್ತು ಭಾವನೆಗೆ ಬಿಟ್ಟಿದ್ದು.””ಪ್ರಶ್ನಿಸುವವರನ್ನು ಹಿಂದೂ ಎಂದು ಕರೆಯುವುದು ಏಕೆ? ಈ ದೇಶದ ಪ್ರಜೆಯಾಗಿ ಪ್ರಶ್ನಿಸುವ ಹಕ್ಕು ನನಗಿದೆ.” “ನಮಗೆ ಬೇಕಿರುವುದು ಸೌಜನ್ಯಾ ಸಾವು ಮತ್ತು ಆ ಸರಣಿ ಸಾವುಗಳು ಏಕೆ ಸಂಭವಿಸಿದವು ಎಂಬ ಸತ್ಯ. ಆದರೆ ಕೆಲವರು ವಿಷಯವನ್ನು ಸಂಪೂರ್ಣವಾಗಿ ತಿರುಚಿ ಬೇರೆ ರೀತಿಯಲ್ಲೇ ಬಿಂಬಿಸುತ್ತಿದ್ದಾರೆ.”

ಧರ್ಮಸ್ಥಳದ ಹೆಸರನ್ನು ಕೆಡಿಸುವ ಯಾವುದೇ ಷಡ್ಯಂತ್ರದಲ್ಲಿ ಭಾಗಿಯಾಗಿಲ್ಲ ಎಂದು ಪುನರುಚ್ಚರಿಸಿದ ನಟ, ಸುಳ್ಳು ಸುದ್ದಿಗಳನ್ನು ನಂಬಬೇಡಿ ಎಂದು ಜನರಲ್ಲಿ ಮನವಿ ಮಾಡಿದರು.

# ಇಂದು ಎನ್.ಎಸ್.ಬೋಸರಾಜು ರವರಿಗೆ ಸಚಿವ ಸ್ಥಾನ ನೀಡುವಂತೆ ಎನ್.ಎಸ್.ಬೋಸರಾಜು ಅಭಿಮಾನಿ ಬಳಗದಿಂದ ಸಭೆ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಸವ ವೃತ್ತದಲ್ಲಿ ಜೂ.18 ರಂದು ಬೆಳಿಗ್ಗೆ 10ಕ್ಕೆ ಎನ್.ಎಸ್.ಬೋಸರಾಜು ಅಭಿಮಾನಿ ಬಳಗದ ವತಿಯಿಂದ ಜಿಲ್ಲೆಯ ವಿಧಾನಪರಿಷತ್ ಸದಸ್ಯರು ಮಾಜಿ ಸಚಿವರಾದ ಎನ್.ಎಸ್.ಬೋಸರಾಜು ರವರನ್ನು ರಾಜ್ಯದ ಸಚಿವ ಸಂಪುಟದಲ್ಲಿ ಮುಂದುವರೆಸಬೇಕು ಹಾಗೂ ರಾಯಚೂರು ಜಿಲ್ಲೆಯ ಉಸ್ತುವಾರಿ ಸಚಿವರನ್ನಾಗಿ ನೇಮಕ ಮಾಡಬೇಕು ಎಂದು ಒತ್ತಾಯಿಸಿ ಮಾನ್ವಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಮುಖಂಡರು ,ಕಾರ್ಯಕರ್ತರ ಸಭೆಯನ್ನು ಅಯೋಜಿಸಲಾಗಿದು ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ,ಕಾರ್ಯಕರ್ತರು ಆಗಮಿಸುವಂತೆ ಎನ್.ಎಸ್.ಬೋಸರಾಜು ಅಭಿಮಾನಿ ಬಳಗದ ಸಂಚಲಕರಾದ ಶೇಖ್ ಸತ್ತಾರವಾಲೆ ಪ್ರಕಟಣೆಯಲ್ಲಿ ಕೋರಿದ್ದಾರೆ


ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


# ವಿದ್ಯುತ್ ಕಂಪನಿಗಳ ಖಾಸಗೀಕರಣ ವಿರೋಧಿಸಿ ಸಿರವಾರದಲ್ಲಿ ನೌಕರರ ಪ್ರತಿಭಟನೆ



ಧೈರ್ಯದ ದಾರಿ

**ಸಿರವಾರ, ಜೂನ್ 17:** ರಾಜ್ಯದಲ್ಲಿರುವ ವಿದ್ಯುತ್ ಸರಬರಾಜು ಕಂಪನಿಗಳ ಖಾಸಗೀಕರಣವನ್ನು ವಿರೋಧಿಸಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕವಿಪ್ರನಿ) ನೌಕರರ ಸಂಘದ (ಸಂಘದ ಸಂಖ್ಯೆ 659) ಪ್ರಾಥಮಿಕ ಸಮಿತಿಯ ವತಿಯಿಂದ ಇಂದು ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ರಾಯಚೂರು ರಸ್ತೆಯಲ್ಲಿರುವ ಜೇಸ್ಕಾಂ (GESCOM) ಉಪವಿಭಾಗದ ಕಚೇರಿ ಮುಂದೆ ಜಮಾಯಿಸಿದ ನೌಕರರು, ಬ್ಯಾನರ್ ಮತ್ತು ಕರಪತ್ರಗಳನ್ನು ಪ್ರದರ್ಶಿಸುವ ಮೂಲಕ ಸರ್ಕಾರದ ಕ್ರಮದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ಉದ್ದೇಶ ಮತ್ತು ಆತಂಕಗಳು:

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಪ್ರಾಥಮಿಕ ಸಮಿತಿ ಅಧ್ಯಕ್ಷ ಪಂಪನಗೌಡ ಅವರು, "ಮುಂಬೈ ಮೂಲದ ಟಾಟಾ ಪವರ್ ಕಂಪನಿಯು ರಾಜ್ಯದಲ್ಲಿ ವಿದ್ಯುತ್ ಸರಬರಾಜು ಮಾಡಲು ಪರವಾನಿಗೆ ಕೋರಿ ಕರ್ನಾಟಕ ವಿದ್ಯುತ್ ಶಕ್ತಿ ನಿಯಂತ್ರಣ ಆಯೋಗಕ್ಕೆ (ಏಇಖಅ) ಅರ್ಜಿ ಸಲ್ಲಿಸಿದೆ. ಈ ಪ್ರಸ್ತಾವನೆಯನ್ನು ಇದೀಗಲೇ ವಿರೋಧಿಸಿ ಆಕ್ಷೇಪಣೆ ಸಲ್ಲಿಸದಿದ್ದರೆ, ಇದು ನೌಕರರ ಪಾಲಿಗೆ ಮರಣಶಾಸನವಾಗಲಿದೆ. ಅಲ್ಲದೆ, ಖಾಸಗೀಕರಣ ದಿಂದಾಗಿ ರೈತರು ಮತ್ತು ಬಡವರಿಗೆ ವಿದ್ಯುತ್ ದರ ಏರಿಕೆಯ ಬಿಸಿ ತಟ್ಟಲಿದೆ" ಎಂದು ಎಚ್ಚರಿಸಿದರು. ಆದ್ದರಿಂದ ನೌಕರರು, ರೈತರು ಮತ್ತು ಸಾರ್ವಜನಿಕರು ಒಗ್ಗೂಡಿ ಈ ನಡೆಯನ್ನು ವಿರೋಧಿಸಬೇಕೆಂದು ಅವರು ಕರೆ ನೀಡಿದರು.

ಈ ಪ್ರತಿಭಟನೆಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಪ್ರಭಾರಿ ಎಇಇ ಮೋಹನ್ ಸಿಂಗ್, ಶಾಖಾಧಿಕಾರಿ ತಿಮ್ಮಾರೆಡ್ಡಿ, ಕವಿತಾ ಜಲಾಲ್, ಹಿರಿಯ ಸಹಾಯಕ ತಿಮ್ಮಾರೆಡ್ಡಿ, ಸಿಬ್ಬಂದಿ ವರ್ಗದವರು ಮತ್ತು ಮಾರ್ಗದಾಳುಗಳು ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ರಾಜ್ಯ ಯುವ ಉದ್ಯಮಿ ಪ್ರಶಸ್ತಿ ಪಡೆದ ಡಾ. ಮೋಹನ್ ಕುಮಾರ್ ಜಿಲ್ಲಾ ಅಧ್ಯಕ್ಷರ ಗೌರವಕ್ಕೆ ಭಾಜನರಾದ ಕಮಲ್ ಕುಮಾರ್

ಧೈರ್ಯದ ದಾರಿ




**ತುಮಕೂರು, ಜೂ. 17:** ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಗಳ ರಾಜ್ಯ ಮಟ್ಟದ ಸಮ್ಮೇಳನ–2026ರಲ್ಲಿ ರಾಯಚೂರು ಜಿಲ್ಲೆಯ ಇಬ್ಬರು ಗಣ್ಯರಿಗೆ ಪ್ರತಿಷ್ಠಿತ ರಾಜ್ಯ ಮಟ್ಟದ ಗೌರವಗಳು ಲಭಿಸಿವೆ. ಡಾ. ಮೋಹನ್ ಕುಮಾರ್ ಬಿ ಅವರಿಗೆ ರಾಜ್ಯ ಯುವ ಉದ್ಯಮಿ ಪ್ರಶಸ್ತಿ ಹಾಗೂ ರಾಯಚೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ಅಧ್ಯಕ್ಷರಾದ ಶ್ರೀ ಎಸ್. ಕಮಲ್ ಕುಮಾರ್ ಅವರಿಗೆ ಜಿಲ್ಲಾ ಅಧ್ಯಕ್ಷರ ಗೌರವ ಪ್ರಶಸ್ತಿ ಪ್ರದಾನ ಮಾಡಲಾಯಿತು.

ತುಮಕೂರಿನ ಹೆಗ್ಗೆರೆಯ ಶ್ರೀ ಗಂಗಾಧರಯ್ಯ ಸ್ಮಾರಕ ಸಭಾಂಗಣದಲ್ಲಿ ಜೂನ್ 6 ಮತ್ತು 7 ರಂದು ನಡೆದ ಸಮ್ಮೇಳನದಲ್ಲಿ ಕರ್ನಾಟಕದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಭಾಗವಹಿಸಿ ಉದ್ಯಮಿಗಳ ಕೊಡುಗೆಯನ್ನು ಶ್ಲಾಘಿಸಿದರು. ಕೈಗಾರಿಕೆ ಮತ್ತು ವಾಣಿಜ್ಯ ಕ್ಷೇತ್ರದ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸುವ ಭರವಸೆ ನೀಡಿದರು.

ಸಮ್ಮೇಳನದಲ್ಲಿ ಸಿದ್ದಗಂಗಾ ಮಠದ ಶ್ರೀ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ಹಾಗೂ ತುಮಕೂರು ಹಿರೇಮಠದ ಶ್ರೀ ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಆಶೀರ್ವಚನ ನೀಡಿದರು. ಭಾರತ ಸರ್ಕಾರದ ಜಲಶಕ್ತಿ ಮತ್ತು ರೈಲ್ವೆ ರಾಜ್ಯ ಸಚಿವ ಶ್ರೀ ವಿ. ಸೋಮಣ್ಣ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಒಕ್ಕೂಟದ (FKCCI) ಅಧ್ಯಕ್ಷೆ ಶ್ರೀಮತಿ ಉಮಾ ರೆಡ್ಡಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

**‘ಸಮೃದ್ಧಿ’ ಬ್ರ್ಯಾಂಡ್ ಮೂಲಕ ಸಾಧನೆ:** ಆಹಾರ ಸಂಸ್ಕರಣಾ ಕ್ಷೇತ್ರದಲ್ಲಿ ಯುವ ವಯಸ್ಸಿನಲ್ಲಿಯೇ ಗಮನಾರ್ಹ ಸಾಧನೆ ಮಾಡಿದ ಹಿನ್ನೆಲೆಯಲ್ಲಿ ಟೇಸ್ಟ್ ಬಡ್ಸ್ ಸಂಸ್ಥೆಯ ಸ್ಥಾಪಕ ಹಾಗೂ ನಿರ್ದೇಶಕರಾದ ಡಾ. ಮೋಹನ್ ಕುಮಾರ್ ಬಿ ಅವರಿಗೆ ರಾಜ್ಯ ಯುವ ಉದ್ಯಮಿ ಪ್ರಶಸ್ತಿ ನೀಡಲಾಯಿತು. ಅವರ ಸಂಸ್ಥೆ ‘ಸಮೃದ್ಧಿ’ ಬ್ರ್ಯಾಂಡ್ ಅಡಿಯಲ್ಲಿ ರಾಗಿ ಹಿಟ್ಟು, ರಾಗಿ ರವೆ ಹಾಗೂ ಗೋಧಿ ಚಕ್ಕಿ ಹಿಟ್ಟು ಉತ್ಪಾದನೆ ಮಾಡುತ್ತಿದೆ.

ಪ್ರಶಸ್ತಿ ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ರಾಯಚೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ಸದಸ್ಯರಿಗೆ ಹಾಗೂ ರಾಯಚೂರು ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ. ಹನುಮಂತಪ್ಪ ಮತ್ತು ಆಹಾರ ಸಂಸ್ಕರಣಾ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಉದಯ್ ಕುಮಾರ್ ನಿಡೋನಿ ಅವರಿಗೆ ಕೃತಜ್ಞತೆ ಸಲ್ಲಿಸಿದರು.

**ಜಿಲ್ಲೆಯ ಅಭಿವೃದ್ಧಿಗೆ ಕಮಲ್ ಕುಮಾರ್ ಕೊಡುಗೆ:** ರಾಯಚೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ಅಧ್ಯಕ್ಷರಾದ ಶ್ರೀ ಎಸ್. ಕಮಲ್ ಕುಮಾರ್ ಅವರು ಜಿಲ್ಲೆಯ ಕೈಗಾರಿಕೆ, ವ್ಯಾಪಾರ ಸಂಸ್ಥೆಗಳು ಹಾಗೂ ಉದ್ಯಮಿಗಳ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ಪ್ರತಿನಿಧಿಸಿ ಪರಿಹಾರ ಒದಗಿಸಿದ ಸೇವೆಯನ್ನು ಗುರುತಿಸಿ ಜಿಲ್ಲಾ ಅಧ್ಯಕ್ಷರ ಗೌರವ ಪ್ರಶಸ್ತಿಗೆ ಭಾಜನರಾದರು.

ತುಮಕೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿಯ ಬೆಳ್ಳಿ ಮಹೋತ್ಸವ ಅಂಗವಾಗಿ ಆಯೋಜಿಸಿದ್ದ ಸಮ್ಮೇಳನಕ್ಕೆ ಅಧ್ಯಕ್ಷ ಶ್ರೀ ಪಾಂಡುರಂಗ ಕೆ. ನೇತೃತ್ವ ವಹಿಸಿದ್ದರು. ಎಫ್‌ಕೆಸಿಸಿಐ ಜಿಲ್ಲಾ ಸಮನ್ವಯ ಸಮಿತಿಯ ಅಧ್ಯಕ್ಷ ಶ್ರೀ ಸುಜ್ಞಾನ್ ಹಿರೇಮಠ್ ಕಾರ್ಯಕ್ರಮವನ್ನು ಸಂಯೋಜಿಸಿದರು.

**ಸಮ್ಮೇಳನದಲ್ಲಿ ಆರ್‌ಡಿಸಿಸಿಐ ಪ್ರತಿನಿಧಿಗಳು**

ಶ್ರೀ ಎಸ್. ಕಮಲ್ ಕುಮಾರ್ –ಅಧ್ಯಕ್ಷರು

ಶ್ರೀ ತ್ರಿವಿಕ್ರಮ್ ಜೋಶಿ –ಐಪಿಪಿ

ಶ್ರೀ ವೈ. ಜಂಬಣ್ಣ – ಕಾರ್ಯದರ್ಶಿ

ಶ್ರೀ ಉದಯ್ ಕಿರಣ್ – ಕಾರ್ಯಕಾರಿ ಸಮಿತಿ ಸದಸ್ಯ

ಡಾ. ಮೋಹನ್ ಕುಮಾರ್ ಬಿ – ರಾಜ್ಯ ಯುವ ಉದ್ಯಮಿ ಪ್ರಶಸ್ತಿ ಪುರಸ್ಕೃತರು

# ಜೂನ್ 18 ರಂದು ’ಗಡಿನಾಡು ಕನ್ನಡ ಜಾಗೃತಿ ಜಾಥಾ’: ಮೌನೇಶ ಪಿತಗಲ್



ಧೈರ್ಯದ ದಾರಿ

**ಸಿರವಾರ (ಜೂನ್ 17):** ಕನ್ನಡ ಸೇನೆ ಕರ್ನಾಟಕ ರಾಜ್ಯಾಧ್ಯಕ್ಷ ಕೆ.ಆರ್. ಕುಮಾರ್ ಅವರ ಹುಟ್ಟುಹಬ್ಬದ ಅಂಗವಾಗಿ, ಕನ್ನಡ ಭಾಷೆ ಮತ್ತು ನಾಡಿನ ಹಿತರಕ್ಷಣೆಗಾಗಿ ಜೂನ್ 18ರಂದು ’ಗಡಿನಾಡು ಕನ್ನಡ ಜಾಗೃತಿ ಜಾಥಾ’ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆಯ ತಾಲೂಕು ಅಧ್ಯಕ್ಷ ಮೌನೇಶ ಪಿತಗಲ್ ತಿಳಿಸಿದ್ದಾರೆ.

ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸುವುದು, ಸರ್ಕಾರಿ ಕಚೇರಿ ಹಾಗೂ ವಾಣಿಜ್ಯ ಸಂಸ್ಥೆಗಳಲ್ಲಿ ಕನ್ನಡ ನಾಮಫಲಕಗಳನ್ನು ಕಡ್ಡಾಯಗೊಳಿಸುವುದು ಮತ್ತು ಗಡಿನಾಡು ಕನ್ನಡಿಗರಿಗೆ ಉದ್ಯೋಗದಲ್ಲಿ ಮೊದಲ ಆದ್ಯತೆ ನೀಡಬೇಕು ಎಂಬ ಪ್ರಮುಖ ಬೇಡಿಕೆಗಳ ಈಡೇರಿಕೆಗಾಗಿ ಈ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ," ಎಂದು ವಿವರಿಸಿದರು.

ರಾಯಚೂರು ನಗರದ ಆರ್‌ಟಿಓ (RTO) ವೃತ್ತದಿಂದ ಬೃಹತ್ ಬೈಕ್ ಜಾಥಾ ಆರಂಭವಾಗಿ, ನಗರದ 2ನೇಪುಟಕ್ಕೆ

# ಆರ್ಯ ವೈಶ್ಯ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಂದ ಫಲಾನುಭವಿಗಳ ಘಟಕ್ಕೆ ಭೇಟಿ

ಧೈರ್ಯದ ದಾರಿ

**ರಾಯಚೂರು ಜೂನ್ 17:** ಬೆಂಗಳೂರಿನ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ದೀಪಾಶ್ರೀ ಕೆ. ಅವರು ಇತ್ತೀಚಿಗೆ ರಾಯಚೂರು ಜಿಲ್ಲೆಗೆ ಅಗಮಿಸಿ ಜಿಲ್ಲೆಯಲ್ಲಿ ನಿಗಮದಿಂದ ಸಾಲ ಸೌಲಭ್ಯ ಪಡೆದ ಫಲಾನುಭವಿಗಳ ಘಟಕಗಳನ್ನು ಪರಿಶೀಲನೆ ಮಾಡಿ, ಫಲಾನುಭವಿಗಳಿಗೆ ಪಡೆದ ಸಾಲವನ್ನು ಸದುಪಯೋಗಪಡಿಸಿ ಕೊಂಡು ನಿಯಮಿತವಾಗಿ ಸಾಲದ ಮರು ಪಾವತಿಯನ್ನು ಮಾಡುವಂತೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಎಡಿಓ ಸುಧಾಕರ್, ರಮೇಶ ಸೇರಿದಂತೆ ಇತರರು ಇದ್ದರು.



# ರಾಯಚೂರು ಮಹಾನಗರ ಪಾಲಿಕೆಯಿಂದ ಪ್ರಧಾನಮಂತ್ರಿ ಅವಾಜ್ 2.0 ಯೋಜನೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು ಜೂನ್ 16:** ರಾಯಚೂರು ಮಹಾನಗರ ಪಾಲಿಕೆಯ ವತಿಯಿಂದ 2026-27ನೇ ಸಾಲಿನ ನಗರ ಪ್ರದೇಶಗಳಲ್ಲಿ ಪ್ರಧಾನಮಂತ್ರಿ ಅವಾಜ್ ಯೋಜನೆ (ನಗರ) 2.0 ಯೋಜನೆ ಅಡಿಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾಸಲಾಗಿದೆ.
ಈ ಯೋಜನೆಅಡಿ ವಸತಿ ರಹಿತ/ ನಿವೇಶ ರಹಿತ ಒಚಿಟಿ ಮಹಿಳೆಯರು, ವಿಕಲಚೇತನರು, ಹಿರಿಯ ನಾಗರೀಕರು, ತೃತಿಯ ಲಿಂಗಿಗಳು, ಎಸ್.ಸಿ/ ಎಸ್.ಟಿ./ ಹಿಂದುಳಿದ ಅಲ್ಪಸಂಖ್ಯಾತ ವರ್ಗದವರು ಸ್ವಚ್ಛತಾ ಕಾರ್ಮಿಕರು, ಪಿಎಮ್ ಸ್ವಾಧಿನಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ-ಬದಿ ವ್ಯಾಪಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು ಮತ್ತು ವಲಸೆ ಬಂದ ಕುಟುಂಬದವರು ತಮ್ಮ ಅರ್ಜಿಗಳನ್ನು ವೆಬ್‌ಸೈಟ್ ವಿಳಾಸ: URL:http//pmay-urban.gov.in ನಲ್ಲಿ ಅಥವಾ ಸಿಎಸ್‌ಸಿ ಕೇಂದ್ರಗಳಲ್ಲಿ ಸ್ವತಃ ಅರ್ಜಿಯನ್ನು ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಪಾಲಿಕೆಯ ಕಚೇರಿಯ ಸಮಯದಲ್ಲಿ ಕಚೇರಿಗೆ ಸಲ್ಲಿಸಬೇಕು. ಅವಧಿ ಮೀರಿ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ವಸತಿ ರಹಿತರು ನಿವೇಶನ ದಾಖಲೆಗಳಾದ ಹಕ್ಕುಪತ್ರ/ ಕ್ರಯಪತ್ರ/ ದಾನಪತ್ರ/ ಉಡುಗೊರೆ ಪತ್ರ/ ಖಾತಾ ದಾಖಲೆಗಳನ್ನು ಲಗತ್ತಿಸಿ ಕುಟುಂಬ ಸದಸ್ಯರ ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕ ಪ್ರತಿ ಮತ್ತು ನಿಗಧಿತ ನಮೂನೆ ರಲ್ಲಿ ಖಜಟಜಿ ಗಟಿಜಜಡಿಣಚಿಞಟಿರ ಸಲ್ಲಿಸುವುದು. ವಸತಿ/ ನಿವೇಶನ ರಹಿತರು ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹೊರತುಪಡಿಸಿ, ಇತರೆ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸೂರಿನ ಈರಮ್ಮ ಕಾಣೆ: ಪತ್ತೆಗೆ ಗ್ರಾಮೀಣ ಪೊಲೀಸರ ಮನವಿ



ಧೈರ್ಯದ ದಾರಿ

**ರಾಯಚೂರು ಜೂನ್ 16:** ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ವ್ಯಾಪ್ತಿಯ ಹೊಸೂರಿನ ನಿವಾಸಿಯಾದ ಈರಮ್ಮ ಗಂಡ ಮಲ್ಲಿಕಾರ್ಜುನ (41) ಎಂಬ ಮಹಿಳೆಯು 2026ರ ಮೇ.26ರ ಬೆಳಿಗ್ಗೆ 11.30ಕ್ಕೆ ದೇವಸ್ಥಾನಕ್ಕೆ ಹೋಗಿ ಬರುವುದಾಗಿ ಹೇಳಿ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಗ್ರಾಮೀಣ ಪೊಲೀಸ ಠಾಣೆಯಲ್ಲಿ ಗುನ್ನೆ ನಂ: 112/2026 ಕಲಂ ಅಡಿಯಲ್ಲಿ ಮಹಿಳೆ ಕಾಣೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

ಕಾಣೆಯಾದ ಮಹಿಳೆ ಚಹರೆ ಪಟ್ಟಿ: ವಯಸ್ಸು 41 ವರ್ಷ, ಜಾತಿ ಕಬ್ಬೇರ, ಉದ್ಯೋಗ ಕೂಲಿ ಕೆಲಸ, ಎತ್ತರ ಅಂದಾಜು 4.5 ಅಡಿ, ಗೋದಿ ಮೈ ಬಣ್ಣ, ಗುಂಡನೇಯ ಮುಖ, ಕಪ್ಪು ಕೂದಲು ಹೊಂದಲಾಗಿದೆ. ಪಿಂಕ್ ಮಿಶ್ರೀತ ಬಿಳಿಯ ಬಣ್ಣದ ಸೀರೆ ಹಾಗೂ ಕಪ್ಪು ಹಸಿರು ಬಣ್ಣದ ಕುಪ್ಪಸ ಧರಿಸಲಾಗಿದ್ದು, ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ.

ಈ ಮೇಲಿನ ಚಹರೆಯುಳ್ಳ ಮಹಿಳೆಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಠಾಣಾಧಿಕಾರಿಗಳು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803850, ಸಿಪಿಐ ಗ್ರಾಮೀಣ ವೃತ್ತ ರಾಯಚೂರು ಮೊಬೈಲ್ ಸಂಖ್ಯೆ: 9480803832, ಡಿಎಸ್ಪಿ ರಾಯಚೂರು ಮೊಬೈಲ್ ಸಂಖ್ಯೆ: 9480803820, ರಾಯಚೂರು ಕಂಟ್ರೋಲ್ ರೂಮ್ ದೂರವಾಣಿ ಸಂಖ್ಯೆ: 08532-235635ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
ನೇರ ಗುತ್ತಿಗೆ ಆಧಾರದ ಮೇಲೆ ಸೇವೆ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ ಎಂದು ಸಮಗ್ರ ಶಿಕ್ಷಣ ಕರ್ನಾಟಕ ರಾಯಚೂರು ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು ಹಾಗೂ ಉಪನಿರ್ದೇಶಕರು ತಿಳಿಸಿದ್ದಾರೆ.
ಪೂರ್ವ ಪ್ರಾಥಮಿಕ ವಿಭಾಗದಲ್ಲಿ 1 ರಿಂದ 5ನೇ ತರಗತಿಗೆ ಆರ್‌ಸಿಐ ಅನುಮೋದಿತ ಸಂಸ್ಥೆಯಿಂದ ವಿಶೇಷ ಶಿಕ್ಷಣದಲ್ಲಿ ಡಿ.ಎಡ್. ಪದವಿ ಮತ್ತು ಆರ್‌ಸಿಐ, ಸಿಆರ್‌ಆರ್ ಸಂಖ್ಯೆ ಹೊಂದಿರಬೇಕು. ಅಥವಾ ಆರ್‌ಸಿಐ ಅನುಮೋದಿತ ಸಂಸ್ಥೆಯಿಂದ ಮಾನ್ಯತೆ ಪಡೆದ ಅರ್ಹತೆ (ಪ್ರಮಾಣಪತ್ರ/ ಡಿಪ್ಲೊಮಾ) ಹೊಂದಿರುವ ಡಿ.ಎಲ್.ಎಡ್., ವಿಶೇಷ ಶಿಕ್ಷಣದಲ್ಲಿ ಡಿ.ಎಡ್.ಗೆ ಸಮನಾಗಿರಬೇಕು. ಮತ್ತು ಆರ್‌ಸಿಐ ಸಿಆರ್‌ಆರ್ ಸಂಖ್ಯೆ ಹೊಂದಿರಬೇಕು. ಅಂತರ್ಗತ ಶಿಕ್ಷಣದಲ್ಲಿ ಅಡ್ಡ ಅಂಗವೈಕಲ್ಯ ಪ್ರದೇಶದಲ್ಲಿ ಆರು ತಿಂಗಳ ಬೋಧನಾ ತರಬೇತಿಯನ್ನು ಹೊಂದಿರಬೇಕು.

ಪ್ರೌಢ ಶಾಲಾ ವಿಭಾಗದಲ್ಲಿ 6ರಿಂದ 8 ಹಾಗೂ 9ರಿಂದ 12ನೇ ತರಗತಿಗೆ ಆರ್‌ಸಿಐ ಅನುಮೋದಿತ ಸಂಸ್ಥೆಯಿಂದ ವಿಶೇಷ ಶಿಕ್ಷಣದಲ್ಲಿ ಬಿ.ಎಡ್. ಪದವಿ ಪಡೆದಿರಬೇಕು ಮತ್ತು ಮಾನ್ಯ ಆರ್‌ಸಿಐ ಮತ್ತು ಸಿಆರ್‌ಆರ್ ಸಂಖ್ಯೆಯನ್ನು ಹೊಂದಿರಬೇಕು. ಅಥವಾ ಆರ್‌ಸಿಐ ಅನುಮೋದಿತ ಸಂಸ್ಥೆಯಿಂದ ವಿಶೇಷ ಶಿಕ್ಷಣದಲ್ಲಿ ಬಿ.ಎಡ್.ಗೆ ಸಮಾನವಾದ ಮಾನ್ಯತೆ ಪಡೆದ ಅರ್ಹತೆ (ಪ್ರಮಾಣಪತ್ರ/ ಡಿಪ್ಲೊಮಾ) ಹೊಂದಿರುವ ಬಿ.ಎಡ್. ಪದವಿ ಪಡೆದಿರಬೇಕು. ಮತ್ತು ಆರ್‌ಸಿಐ ಮತ್ತು ಸಿಆರ್‌ಆರ್ ಸಂಖ್ಯೆಯನ್ನು ಹೊಂದಿರಬೇಕು. ಅಂತರ್ಗತ ಶಿಕ್ಷಣದಲ್ಲಿ ಅಡ್ಡ ಅಂಗವೈಕಲ್ಯ ಪ್ರದೇಶದಲ್ಲಿ ಬೋಧನೆಯ ಆರು ತಿಂಗಳ ತರಬೇತಿಯನ್ನು ಹೊಂದಿರಬೇಕು.

ಆಸಕ್ತರು ಅರ್ಜಿಯನ್ನು ಜೂನ್ 20ರೊಳಗಾಗಿ ಕಚೇರಿಯ ಸಮಯದಲ್ಲಿ ಉಪನಿರ್ದೇಶಕರು ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿ ಸಮಗ್ರ ಶಿಕ್ಷಣ ಕರ್ನಾಟಕ ಕೂಠಡಿ.ಸಂಖ್ಯೆ ಸಿ-11 & ಸಿ-12 ಬ್ಲಾಕ್ ನೆಲಮಹಡಿ, ನೂತನ ಜಿಲ್ಲಾಡಳಿತ ಭವನ, ಯಕ್ಲಾಸಪೂರ ರಾಯಚೂರು-584104ಗೆ ಸಲ್ಲಿಸಬಹುದಾಗಿದೆ ಎಂದು ಸಮಗ್ರ ಶಿಕ್ಷಣ ಕರ್ನಾಟಕ ರಾಯಚೂರು ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು ಹಾಗೂ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಟಕಗಳು ಕಾಲಘಟ್ಟದ ಸಾಮಾಜಿಕ ಸ್ಥಿತಿಯ ಕನ್ನಡಿ



**ಬಳ್ಳಾರಿ, ಜೂ.16:** ನಾಟಕಗಳು ಆಯಾ ಕಾಲಘಟ್ಟದ ಸಾಮಾಜಿಕ ಪರಿಸ್ಥಿತಿಯ ಕನ್ನಡಿ ಹಿಡಿಯುವ ಕೆಲಸ ಮಾಡುತ್ತಿದ್ದು ವರ್ತಮಾನದಲ್ಲಿ ಪ್ರಭಾವ ಬೀರುತ್ತವೆ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ತಿಳಿಸಿದರು. ತಾಲೂಕಿನ ಕಪ್ಪಗಲ್ಲು ಗ್ರಾಮದಲ್ಲಿ ರಂಗತೋರಣ ಸಾಂಸ್ಕೃತಿಕ ಸಂಘಟನೆ ಹಮ್ಮಿಕೊಂಡಿದ್ದ ಕಪ್ಪಗಲ್ಲು ನಾಟಕೋತ್ಸವದಲ್ಲಿ ಹಿರಿಯ ರಂಗಭೂಮಿ ಕಲಾವಿದರಾದ ಆದವಾನಿ ವೀಣಾ ಹಾಗೂ ಶ್ರೀಧರ ಹೆಗಡೆ ಅವರಿಗೆ ರಾಜ್ಯಮಟ್ಟದ "ಸಾಂಸ್ಕೃತಿಕ ಸಾರ್ವಭೌಮ ಜೋಳದರಾಶಿ ದೊಡ್ಡನಗೌಡ ರಂಗತೋರಣ ಪುರಸ್ಕಾರ" ಪ್ರದಾನ ಮಾಡಿ ಅವರು ಮಾತನಾಡಿದರು.

ಮಹಾತ್ಮಗಾಂಧೀಜಿಯವರ ಮೇಲೆ ಹರಿಶ್ಚಂದ್ರ ನಾಟಕ ಪ್ರಭಾವ ಬೀರಿತ್ತು. ವ್ಯಕ್ತಿ ಅಥವಾ ಜನಸಮುದಾಯದ ಮೇಲೆ ಪ್ರಭಾವ ಬೀರುವ ಶಕ್ತಿ ರಂಗಭೂಮಿಗಿದೆ. ನಿರಂತರ ನಾಟಕೋತ್ಸವಗಳ ಮೂಲಕ ಜನರ ಮನಸ್ಸನ್ನು ಅರಳಿಸುವ ಕೆಲಸ ಮಾಡುತ್ತಿರುವ ರಂಗತೋರಣ ಕಾರ್ಯ ಶ್ಲಾಘನೀಯ. ಗ್ರಾಮೀಣ ಪರಿಸರದಲ್ಲಿ ರಂಗಚಟುವಟಿಕೆಗಳು ನಿರಂತರವಾಗಿ ನಡೆಯುವಂತಾಗಬೇಕು. ಆಗ ಮಾತ್ರ ಸಾಂಸ್ಕೃತಿಕ ವಾತಾವರಣವನ್ನು ಎಲ್ಲೆಡೆ ಜೀವಂತವಾಗಿಡಲು ಸಾಧ್ಯವಾಗಲಿದೆ ಎಂದರು. ಸಮಾಜದ ಅಭಿವೃದ್ಧಿಯನ್ನು ಕೇವಲ ಆರ್ಥಿಕ ಮಾನದಂಡಗಳಿಂದ ಅಳೆಯಲು ಸಾಧ್ಯವಿಲ್ಲ. ಹಣ, ಆಸ್ತಿ, ಅಧಿಕಾರ ಮತ್ತು ಭೌತಿಕ ಸೌಲಭ್ಯಗಳು ಕಾಲಕ್ರಮೇಣ ಕಳೆದುಹೋಗಬಹುದು. ಆರ್ಥಿಕ ಶ್ರೀಮಂತಿಕೆ ಏರಿಳಿತಗಳಿಗೆ ಒಳಗಾಗುವುದು ಸಹಜ. ಆದರೆ ಒಂದು ಸಮಾಜದ ನಿಜವಾದ ಗುರುತು ಅದರ ಸಂಸ್ಕೃತಿ, ಪರಂಪರೆ, ಕಲೆ, ಸಾಹಿತ್ಯ ಮತ್ತು ಮೌಲ್ಯಗಳಲ್ಲಿ ಅಡಗಿದೆ. ಇವುಗಳೇ ಆ ಸಮಾಜದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಪ್ರತಿಬಿಂಬಿಸುತ್ತವೆ. ಈ ಸಾಂಸ್ಕೃತಿಕ ಸಂಪತ್ತು ಪೀಳಿಗೆಯಿಂದ ಪೀಳಿಗೆಗೆ ಸಾಗುತ್ತಾ ಸಮಾಜವನ್ನು ಜೀವಂತವಾಗಿರಿಸುತ್ತದೆ ಎಂದು ತಿಳಿಸಿದರು.

ಜೀವನವೇ ಒಂದು ನಾಟಕ ರಂಗ. ಅವನು ಕರೆದ ಕೂಡಲೇ ಎಲ್ಲವನ್ನೂ ಬಿಟ್ಟು ಹೋಗಿ ಬಿಡಬೇಕಂತೆ. ಆದರೆ, ಈ ಜೀವನ ಎಂಬ ನಾಟಕ ರಂಗದಲ್ಲಿ ನೈತಿಕ ಮೌಲ್ಯಗಳನ್ನು ಉಳಿಸಿಕೊಂಡು ಉತ್ತಮ ಪಾತ್ರಧಾರಿಗಳಾದರೆ ಮಾತ್ರ ಹೆಸರು ಶಾಶ್ವತವಾಗಿ ಉಳಿಯುತ್ತದೆ. ಹಣ, ಆಸ್ತಿ, ಅಧಿಕಾರ ಮತ್ತು ಸ್ಥಾನಮಾನಗಳು ಶಾಶ್ವತವಲ್ಲ. ಆದರೆ ಸಮಾಜದ ಒಳಿತಿಗಾಗಿ ಬದುಕಿದವರು, ಮಾನವೀಯ ಮೌಲ್ಯಗಳನ್ನು ಉಳಿಸಿದವರು ಮತ್ತು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಿದವರು ಜನರ ಹೃದಯದಲ್ಲಿ ಸದಾಕಾಲ ಜೀವಂತವಾಗಿರುತ್ತಾರೆ ಎಂದು ಹೇಳಿದರು.

ಆಂಧ್ರಪ್ರದೇಶದ ಉರವಕೊಂಡ ಮಠದ ಡಾ.ಕರಿಬಸವ ರಾಜೇಂದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿದರು. ಪ್ರಾಸ್ತಾವಿಕ ಮಾತನಾಡಿದ ರಂಗತೋರಣ ಸಂಸ್ಥೆಯ ಅಧ್ಯಕ್ಷ ಪ್ರೊ.ಭೀಮಸೇನ ಅವರು ಮೂರು ದಿನಗಳ ನಾಟಕೋತ್ಸವದ ಯಶಸ್ವಿಗೆ ಶ್ರಮಿಸಿದ ಗ್ರಾಮಸ್ಥರ ಸಹಕಾರವನ್ನು ಸ್ಮರಿಸಿದರಲ್ಲದೆ, ನಾಟಕ ಬರೀ ಮನರಂಜನೆಯಷ್ಟೇ ಅಲ್ಲ; ಮನೋವಿಕಾಸವೂ ಹೌದ. ನಾಟಕದಲ್ಲಿ ಬರುವ ನೀತಿಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಲ್ಲಿ ಮಾತ್ರ ನಾಟಕೋತ್ಸವ ಶ್ರಮ ಸಾರ್ಥಕವಾಗುತ್ತದೆ ಎಂದು ಹೇಳಿದರು. ಬಳಿಕ ರಾಜ್ಯಮಟ್ಟದ ಸಾಂಸ್ಕೃತಿಕ ಸಾರ್ವಭೌಮ ಜೋಳದರಾಶಿ ದೊಡ್ಡನಗೌಡ ರಂಗತೋರಣ ಪುರಸ್ಕೃತರ ಸಾಧನೆಯನ್ನು ಪರಿಚಯಿಸಿದರು. ಲೆಕ್ಕ ಪರಿಶೋಧಕ ಎರಿಸ್ವಾಮಿ ಚಿಲ್ಕರಾಯಿ, ಎಪಿಎಂಸಿ ಉಪಾಧ್ಯಕ್ಷ ರಾಮಣ್ಣ, ಬೆಂಗಳೂರಿನ ಸಾಮಾಜಿಕ ಕಾರ್ಯಕರ್ತ ವಾದಿರಾಜ ಉಪಸ್ಥಿತರಿದ್ದರು. ರಂಗತೋರಣ ಕಾರ್ಯದರ್ಶಿ ಪ್ರಭುದೇವ ಕಪ್ಪಗಲ್ಲು ಹಾಗೂ ಜೋಳದರಾಶಿ ದೊಡ್ಡನಗೌಡ ಪ್ರತಿಷ್ಠಾನದ ಅಧ್ಯಕ್ಷ ಕೆ.ಪೊಂಪನಗೌಡ ಕಾರ್ಯಕ್ರಮ ನಿರ್ವಹಿಸಿದರು. ನಾಟಕೋತ್ಸವದ ಯಶಸ್ಸಿಗಾಗಿ ಶ್ರಮಿಸಿದ ಮೆಹತಾಬ್, ಚಂದ್ರಶೇಖರ ಆಚಾರ್, ಅಡವಿಸ್ವಾಮಿ, ಅರವಿಂದಯೋಗಿ, ಅನಿಲ್ ಅಂಗಡಿ, ಗಿರೀಶ್ ಆಚಾರ್ ಮತ್ತಿತರರಿದ್ದರು. ಕೊನೆಯಲ್ಲಿ ಜೇವರ್ಗಿ ರಾಜಣ್ಣ ರಚನೆ ಹಾಗೂ ನಿರ್ದೇಶನದ "ರೈತ ಮನೆತನ" ನಾಟಕ ಪ್ರದರ್ಶನಗೊಂಡಿತು.

# ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಪ್ರಗತಿ ಹೊಂದಲು ಕರೆ




**ಬಳ್ಳಾರಿ ಜೂ. 16:** ವಿದ್ಯಾರ್ಥಿ ಜೀವನ ಬಂಗಾರದ ದಿನಗಳ ಜೀವನ, ನೀವು ನಿಮ್ಮ ಪದವಿ ಮುಗಿಸಿಕೊಂಡು ಇನ್ನೂ ಉನ್ನತ ವಿದ್ಯಾಭ್ಯಾಸ ಮಾಡಿ ಒಳ್ಳೆಯ ಉದ್ಯೋಗ ಪಡೆದು ನಿಮ್ಮ ತಾಯಿ ತಂದೆಗಳಿಗೆ, ವಿದ್ಯೆ ಕಲಿಸಿದ ಸಂಸ್ಥೆಗೆ ಹೆಸರು ತರುವಂತಹ ಈ ದೇಶದ ಸತ್ಪ್ರಜೆಗಳಾಗಿ ಬಾಳಿರಿ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಪಿ ಗಾದೆಪ್ಪ ಅವರು ಅಭಿಪ್ರಾಯ ಪಟ್ಟರು. ಶನಿವಾರ ನಗರದ ಜೋಳದರಾಶಿ ದೊಡ್ಡನಗೌಡ ರಂಗ ಮಂದಿರದಲ್ಲಿ ಆಯೋಜಿಸಲಾಗಿದ್ದ ಲಾರ್ಡ್ಸ್ ವಿದ್ಯಾಸಂಸ್ಥೆಯ ಇಂಡೋ-ಅಮೆರಿಕನ್ ಪದವಿ ಕಾಲೇಜು ವಿದ್ಯಾರ್ಥಿಗಳ ಬಿಳ್ಕೋಡಿಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಆರಂಭದಲ್ಲಿ ಲಾರ್ಡ್ಸ್ ವಿದ್ಯಾಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಪಿ ಎಚ್ ನಾಯ್ಡು ಅವರು ಪ್ರಾಸ್ತಾವಿಕ ನುಡಿಗಳನ್ನು ಆಡುತ್ತಾ ವಿದ್ಯಾರ್ಥಿಗಳು ಇಂದಿನ ಸ್ಪರ್ಧಾತ್ಮಕ ಹಾಗೂ ತಂತ್ರಜ್ಞಾನದ ಯುಗದಲ್ಲಿ ಇಂದು ೦ಖಯ (ಕೃತಕ ಬುದ್ಧಿಮತ್ತೆ) ಅವಶ್ಯಕತೆ ತುಂಬಾ ಇದ್ದು ಇದರ ಜ್ಞಾನವನ್ನು ವಿದ್ಯಾರ್ಥಿಗಳು ತಿಳಿದುಕೊಂಡು ಇಂದಿನ ೦ಖ ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕು ಎಂದು ಕರೆಕೊಟ್ಟು ಮುಂದಿನ ದಿನಗಳಲ್ಲಿ ನಿಮ್ಮ ಭವಿಷ್ಯ ಸುಖಮಯವಾಗಿರಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಬಳ್ಳಾರಿಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಎನ್ ನವೀನ ಕುಮಾರ ಅವರು ಮಾತನಾಡುತ್ತಾ ವಿದ್ಯಾರ್ಥಿಗಳು ಕೇವಲ ಪದವಿಗಳನ್ನು ಪಡೆದು ಸಾಮಾನ್ಯ ಉದ್ಯೋಗಗಳನ್ನು ಮಾಡುವುದರ ಬದಲು ಖ ೦ ಖ , ಖ ಕ ಖ , ಖ ಈ ಖ ಮುಂತಾದ ಸ್ಪರ್ಧಾತ್ಮಕ ಜಗತ್ತಿನ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂದು ಕಿವಿ ಮಾತು ಹೇಳಿದರು.

ಸದರಿ ಪದವಿ ಕಾಲೇಜಿನ ಪ್ರಾಚಾರ್ಯರಾದ ಶ್ರೀ ಶೇಕ್ ಸಲೀಮ್ ಬಾಷಾ ಅವರು ಮಾತನಾಡುತ್ತಾ ವಿದ್ಯಾರ್ಥಿಗಳ ಜೊತೆಗಿನ ಸವಿನೆನಪುಗಳನ್ನು ಮೆಲಕು ಹಾಕಿದರು ಮತ್ತು ಶುಭವನ್ನು ಕೋರಿದರು.

ವೇದಿಕೆಯಲ್ಲಿ ಕಾಲೇಜಿನ ಉಪ-ಪ್ರಾಚಾರ್ಯರಾದ ಸುಧೀರ ಕುಮಾರ ಕೆ ಪಿ ಹಾಗೂ ಇಂಡೋ-ಅಮೆರಿಕನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ರಾಜೇಶ ಬಿ.ವಿ ಆಡಳಿತಾಧಿಕಾರಿ ಪಿ ಉದಯ ಭಾಸ್ಕರ ಮತ್ತು ಪಿ ಆರ್ ಓ ರಾಜ ವಿ ಅವರು ಉಪಸ್ಥಿತರಿದ್ದರು.

ಪ್ರಾರ್ಥನೆಯೊಂದಿಗೆ ಕಾರ್ಯಕ್ರಮವನ್ನು ಆರಂಭಿಸಲಾಯಿತು. ಕಾರ್ಯಕ್ರಮದ ನಿರೂಪಣೆ ಹಾಗೂ ವಂದನಾರ್ಪಣೆಯನ್ನು ಬಸವರಾಜ ಅಮಾತಿ ಕನ್ನಡ ಉಪನ್ಯಾಸಕರು ನೆರವೇರಿಸಿದರು, ಪದವಿ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ಉಪಸ್ಥಿತರಿದ್ದರು. ನಂತರ ಕಾಲೇಜಿನ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ಧೂರಿಯಾಗಿ ಜರುಗಿದವು.

# ಪ್ರಕೃತಿಯ ನಾದವೇ ಸಂಗೀತ, ವ್ಯಕ್ತಿತ್ವ ವಿಕಾಸಕ್ಕೆ ಪ್ರೇರಣೆ: ಪ್ರಭುಶ್ರೀ ತಾಯಿ



**ಕಲಬುರಗಿ,ಜೂ.17**–ಗರ್ಭಿಣಿಯರು ಸಂಗೀತ ಆಲಿಸಿದರೆ ಮಗುವಿನ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ಪೂಜ್ಯ ಪ್ರಭುಶ್ರೀ ತಾಯಿ ಹೇಳಿದರು.

ನಗರದ ಕಲಾಮಂಡಳದಲ್ಲಿ ಜೂನ್ 15 ರಂದು ಸೋಮವಾರ ಪ್ರತಿಭಾ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾಸಂಸ್ಥೆ, ನಂದೂರ (ಕೆ) ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಿದ್ದ ಸಂಗೀತ ಸೌರಭ' ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದರು.

ಪ್ರಕೃತಿಯಲ್ಲಿಯೂ ಸಂಗೀತದ ನಾದ ಅಡಕವಾಗಿದ್ದು, ಸಂಗೀತ ಮನುಷ್ಯನಿಗೆ ಮಾನಸಿಕ ಶಾಂತಿ ಯೊಂದಿಗೆ ವ್ಯಕ್ತಿತ್ವಕ್ಕೆ ಪ್ರೇರಣೆ ನೀಡುತ್ತದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗವು ಸಾಹಿತ್ಯ, ಸಂಗೀತ ಹಾಗೂ ಕಲೆಯನ್ನು ಜಗತ್ತಿಗೆ ಪರಿಚಯಿಸಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಅಭಿಪ್ರಾಯಪಟ್ಟರು

ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಡಾ.ಸದಾನಂದ ಪೆರ್ಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ,ಸಂಗೀತ ಇರುವೆಡೆ ನೆಮ್ಮದಿ ಇರುತ್ತದೆ. ಸಾಹಿತ್ಯ ಮತ್ತು ಸಂಗೀತವು ಸಮಾಜಕ್ಕೆ ಅಮೂಲ್ಯ ಕೊಡುಗೆಗಳಾಗಿದ್ದು, ಅವು ಮಾನವನ ಬದುಕನ್ನು ಸಮೃದ್ಧಗೊಳಿಸುತ್ತವೆ ಶಾಂತಿ ನೆಮ್ಮದಿಯನ್ನು ನೀಡುತ್ತದೆ ಎಂದರು . ಸಂಗೀತಗಾರರು ಕೀಳರಿಮೆಯಿಂದ ಹೊರಬಂದು, ಪ್ರಶಸ್ತಿ ಹಾಗೂ ಗೌರವಗಳ ಹಿಂದೆ ಬೀಳದೆ ಸಂಗೀತವನ್ನು ತಪಸ್ಸಿನಂತೆ ಸ್ವೀಕರಿಸಿ ಗುರುಗಳ ಮಾರ್ಗದರ್ಶನದಲ್ಲಿ ಸಂಗೀತ ಕಲಿಯಬೇಕು. ಮೊಬೈಲ್‌ನಂತಹ ಆಧುನಿಕ ಸಾಧನಗಳ ಅವಲಂಬನೆ ಕಡಿಮೆ ಮಾಡಿ ಸಂಗೀತದ ಸಾಧನೆಗೆ ಹೆಚ್ಚು ಒತ್ತು ನೀಡಬೇಕು ಎಂದು ಹೇಳಿದರು.

ಸಂಗೀತಕ್ಕೆ ಜಾತಿ, ಮತ, ಪಂಥ ಹಾಗೂ ಧರ್ಮಗಳ ಬೇಧವಿಲ್ಲ. ವಚನಗಳಿಗೆ ಸಂಗೀತ ಸಂಯೋಜನೆ ಮಾಡುವ ಮೂಲಕ ಸಂಗೀತ ಕ್ಷೇತ್ರಕ್ಕೆ ಸಿದ್ದರಾಮ ಜಂಬಲದಿನ್ನಿ ಅವರ ಕೊಡುಗೆ ಅಪಾರವಾಗಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ವೀರಯ್ಯ ಸ್ವಾಮಿ ಬೀದಿಮನಿ, ಸಿದ್ದಾರಾಮ ಪಾಟೀಲ,ಶಿವರುದ್ರ ಕರಿಕಲ್ಲ್, ಸಂಜೀವ ಕುಮಾರ ಹುಲಸೂರ, ಸಿದ್ದರಾಮರೆಡ್ಡಿ, ಡಾ ಆನಂದ ಪಾಟೀಲ ಸಿದ್ದಾಮಣಿ ವೇದಿಕೆ ಮೇಲೆ ಉಪಸ್ಥಿತರಿದ್ದರು, ಸಂಸ್ಥೆ ಕಾರ್ಯದರ್ಶಿ ನಾಗೇಂದ್ರ ಕಲ್ಲಾ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಣ್ಣಾರಾಯ ಶೆಳ್ಳಗಿ, ಮತ್ತಿಮಡು,ಅನೀಲ ಮಠಪತಿ, ಬಸವರಾಜ ಸ್ಥಾವರಮಠ,ಆನಂದ ನಂದಿಕೋಳಮಠ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ಮೌನೇಶ್ ಪಂಚಾಳ್ ತಬಲಾ ಸಾತ್ ನೀಡಿದರು.

ಸಂಗೀತ ಕಲಾವಿದರಿಗೆ ಗೌರವಿಸಿ ಸನ್ಮಾನಿಸಿದರು, ಡಾ ವೀರಶೆಟ್ಟಿ ಗಾರಂಪಳ್ಳಿ, ಡಾ ಬಸವರಾಜ ಭಾಗಾ, ಸಿ.ಎಸ್. ಮಾಲಿ ಪಾಟೀಲ, ಉಪಸ್ಥಿತರಿದ್ದರು, ಶರಣಗೌಡ ಪಾಟೀಲ ಪಾಳಾ ನಿರೂಪಿಸಿದರು, ಸತೀಶ ಪಾಟೀಲ ವಂದಿಸಿದರು.

## ಯಾದಗಿರಿಯಲ್ಲಿ ಜು. 11ರಂದು ರಾಷ್ಟ್ರೀಯ ಲೋಕ ಅದಾಲತ್



**ಯಾದಗಿರಿ:ಜೂ.17:** ನ್ಯಾಯಾಲಯಗಳಲ್ಲಿ ವರ್ಷಗಳಿಂದ ಬಾಕಿ ಉಳಿದಿರುವ ಪ್ರಕರಣಗಳನ್ನು ತ್ವರಿತವಾಗಿ ಹಾಗೂ ಸೌಹಾರ್ದಯುತವಾಗಿ ಬಗೆಹರಿಸುವ ನಿಟ್ಟಿನಲ್ಲಿ ಜುಲೈ 11ರಂದು ದೇಶಾದ್ಯಂತ ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ಗೆ ಯಾದಗಿರಿ ಜಿಲ್ಲೆಯಲ್ಲೂ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶ ಎಚ್.ಜೆ. ಮರುಳಸಿದ್ದಾರಾಧ್ಯ ತಿಳಿಸಿದ್ದಾರೆ.

ಯಾದಗಿರಿ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾಯಾಲಯದ ಮೆಟ್ಟಿಲೇರಿರುವ ಪ್ರಕರಣಗಳನ್ನು ದೀರ್ಘಕಾಲ ಮುಂದುವರಿಸುವ ಬದಲು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಲೋಕ ಅದಾಲತ್ ಪರಿಣಾಮಕಾರಿ ವೇದಿಕೆಯಾಗಿದೆ ಎಂದರು.

ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಪ್ರಸ್ತುತ 19,579 ಪ್ರಕರಣಗಳು ಬಾಕಿ ಇದ್ದು, ಅವುಗಳಲ್ಲಿ 1,113 ಪ್ರಕರಣಗಳನ್ನು ಜುಲೈ 11ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಲು ಗುರುತಿಸಲಾಗಿದೆ. ನಿಗದಿತ ದಿನಾಂಕದವರೆಗೆ ಇನ್ನಷ್ಟು ಪ್ರಕರಣಗಳು ಸೇರ್ಪಡೆಯಾಗುವ ಸಾಧ್ಯತೆ ಇದೆ ಎಂದು ಹೇಳಿದರು.

ಗುರುತಿಸಲಾದ ಪ್ರಕರಣಗಳ ಕಕ್ಷಿದಾರರು ಹಾಗೂ ವಕೀಲರು ಲೋಕ ಅದಾಲತ್‌ನಲ್ಲಿ ಭಾಗವಹಿಸಿ ಪರಸ್ಪರ ಒಪ್ಪಂದದ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ಇದರಿಂದ ಸಮಯ, ಹಣ ಹಾಗೂ ಶ್ರಮ ಉಳಿಯುವುದರ ಜೊತೆಗೆ ಪ್ರಕರಣಗಳ ಶೀಘ್ರ ಇತ್ಯರ್ಥ ಸಾಧ್ಯವಾಗಲಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್ ಜೊತೆಗೆ ಜುಲೈ 18ರಂದು ಚೆಕ್ ಬೌನ್ಸ್ ಪ್ರಕರಣಗಳ ಇತ್ಯರ್ಥಕ್ಕಾಗಿ ವಿಶೇಷ ಲೋಕ ಅದಾಲತ್ (ಡ್ರೈವ್-2.0) ಆಯೋಜಿಸಲಾಗುತ್ತಿದೆ. ಜುಲೈ 15ರಂದು ಮಧ್ಯಸ್ಥಿಕೆ ಕೇಂದ್ರದ ಮುಂದೆ ಬಾಕಿ ಇರುವ ಪ್ರಕರಣಗಳನ್ನು ಕೈಗೆತ್ತಿಕೊಂಡು ಪರಿಹರಿಸಲಾಗುವುದು ಎಂದು ಮಾಹಿತಿ ನೀಡಿದರು.

ಯಾದಗಿರಿ ಜಿಲ್ಲೆಗೆ ಸಂಬಂಧಿಸಿದಂತೆ ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ 18 ಪ್ರಕರಣಗಳನ್ನು ಇತ್ಯರ್ಥಪಡಿಸಲು ನಿರ್ದೇಶನ ಬಂದಿದೆ. ಈ ಪ್ರಕರಣಗಳನ್ನು ಜುಲೈ 21, 22 ಮತ್ತು 23ರಂದು ನಡೆಯುವ ವಿಶೇಷ ವಿಚಾರಣೆಯಲ್ಲಿ ಕೈಗೆತ್ತಿಕೊಳ್ಳಲಾಗುವುದು. ಸಂಬಂಧಪಟ್ಟ ಕಕ್ಷಿದಾರರಿಗೆ ವಿಚಾರಣೆ ದಿನಾಂಕದ ಬಗ್ಗೆ ಈಗಾಗಲೇ ಮಾಹಿತಿ ನೀಡಲಾಗಿದೆ ಎಂದು ನ್ಯಾಯಾಧೀಶರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಮಾತನಾಡಿ, ಸಂಚಾರ ನಿಯಮ ಉಲ್ಲಂಘನೆಗೆ ಸಂಬಂಧಿಸಿದ ಇ-ಚಲನ್ ಪ್ರಕರಣಗಳ ದಂಡ ಪಾವತಿಗೆ ಸಾರ್ವಜನಿಕರಿಗೆ ವಿಶೇಷ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಜೂನ್ 21ರಿಂದ ಜುಲೈ 10, 2026ರವರೆಗೆ ಬಾಕಿ ಇರುವ ಇ-ಚಲನ್ ದಂಡವನ್ನು ಪಾವತಿಸಿದರೆ ವಿಧಿಸಿರುವ ದಂಡದ ಮೊತ್ತದಲ್ಲಿ ಶೇ.50 ರಿಯಾಯಿತಿ ನೀಡಲಾಗುವುದು ಎಂದರು.

ಅಕ್ಟೋಬರ್ 1, 2025ರಿಂದ ಮೇ 31, 2026ರವರೆಗೆ ಯಾದಗಿರಿ ಜಿಲ್ಲೆಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಸಂಬಂಧ 12,119 ಇ-ಚಲನ್ ಪ್ರಕರಣಗಳು ದಾಖಲಾಗಿದ್ದು, ಒಟ್ಟು ?67,91,900 ದಂಡ ವಿಧಿಸಲಾಗಿದೆ. ಇದರಲ್ಲಿ ?6,40,200 ದಂಡ ಸಂಗ್ರಹವಾಗಿದ್ದು, ಇನ್ನೂ ?61,51,700 ದಂಡ ವಸೂಲಿಗೆ ಬಾಕಿ ಇದೆ ಎಂದು ಹೇಳಿದರು.

ಬಾಕಿ ದಂಡವನ್ನು ಸಂಗ್ರಹಿಸುವ ಉದ್ದೇಶದಿಂದ ಪೊಲೀಸ್ ಇಲಾಖೆ ರಿಯಾಯಿತಿ ಅಭಿಯಾನ ಆರಂಭಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ದಂಡ ಪಾವತಿಗೆ ಯಾದಗಿರಿ ಸಂಚಾರಿ ಪೊಲೀಸ್ ಠಾಣೆ, ಸುಭಾಷ್ ವೃತ್ತ, ಹಳೆಯ ಬಸ್ ನಿಲ್ದಾಣ, ಹೊಸ ಬಸ್ ನಿಲ್ದಾಣ, ಗಂಜ್ ವೃತ್ತ ಹಾಗೂ ಗಾಂಧಿ ವೃತ್ತಗಳಲ್ಲಿ ಕರ್ತವ್ಯದಲ್ಲಿರುವ ಸಂಚಾರಿ ಪೊಲೀಸ್ ಸಿಬ್ಬಂದಿ ಬಳಿ ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್ ಮೂಲಕವೂ ಪಾವತಿ ಮಾಡಲು ಅವಕಾಶವಿದೆ ಎಂದು ತಿಳಿಸಿದರು.

ಆರ್‌ಟಿಒ ದಂಡಕ್ಕೂ ಶೇ.50 ರಿಯಾಯಿತಿ

ಮೋಟಾರು ವಾಹನ ಕಾಯ್ದೆ ಉಲ್ಲಂಘನೆ ಪ್ರಕರಣಗಳಲ್ಲಿ ಯಾದಗಿರಿ ಪ್ರಾದೇಶಿಕ ಸಾರಿಗೆ ಕಚೇರಿ ವ್ಯಾಪ್ತಿಯಲ್ಲಿ 18,49,500 ದಂಡ ವಸೂಲಿ ಬಾಕಿ ಉಳಿದಿದೆ. ಈ ದಂಡ ಮೊತ್ತವನ್ನು ಪಾವತಿಸುವವರಿಗೂ ಜೂನ್ 21ರಿಂದ ಜುಲೈ 10ರವರೆಗೆ ಶೇ.50 ರಿಯಾಯಿತಿ ನೀಡಲಾಗುವುದು ಎಂದು ನ್ಯಾಯಾಧೀಶರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಡಿಎಲ್‌ಎಸ್‌ಎ ಸದಸ್ಯ ಕಾರ್ಯದರ್ಶಿ ಮರಿಯಪ್ಪ,ಆರ್ ಟಿ ಓ ಮಿಲಿಂದಕುಮಾರ್ ಮತ್ತು ಇತರರು ಉಪಸ್ಥಿತರಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626


## ಜೂ.25 ರಂದು ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭದಲ್ಲಿ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಭಾಗಿ

**ಹೊಸಪೇಟೆ.ಜೂ.16–** ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ಸೇರಿದಂತೆ ಮೂರು ರಾಜ್ಯಗಳ 8 ಜಿಲ್ಲೆಗಳ ಜೀವನಾಡಿ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಕಾರ್ಯ ಇದೇ ಜೂ.25 ರಂದು ಜರುಗಲಿದೆ.

ಸ್ಥಳೀಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಈ ವಿಷಯ ತಿಳಿಸಿದರು. ತುಂಗಭದ್ರಾ ಜಲಾಶಯಕ್ಕೆ ನೂತನ ಕ್ರಸ್ಟ್ ಗೇಟುಗಳ ಆಳವಡಿಕೆ ಕಾರ್ಯ ಈಗಾಗಲೇ ಯಶಸ್ವಿಯಾಗಿ ಪೂರ್ಣಗೊಂಡಿದ್ದು. ಹೊಸ ಚೈನ್ ಅಳವಡಿಕೆ ಕಾರ್ಯ ಈಗಾಗಲೇ ಕೊನೆಯ ಹಂತಕ್ಕೆ ತಲುಪಿದ್ದು. ಈ ಹಿನ್ನಲೆಯಲ್ಲಿ ಜೂ.25 ರಂದು ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭವನ್ನು ಕರ್ನಾಟಕ ನೀರಾವರಿ ನಿಗಮದ ನೇತೃತ್ವದಲ್ಲಿ ಅದ್ದೂರಿಯಾಗಿ ನಡೆಸಲು ತೀರ್ಮಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜೂ.25 ರಂದು ಜರುಗಲಿರುವ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭದಲ್ಲಿ ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ರೇವಂತ ರೆಡ್ಡಿ, ಕೇಂದ್ರ ಸರ್ಕಾರದ ನೀರಾವರಿ ಸಚಿವರು ಸೇರಿದಂತೆ ಇನ್ನಿತರ ಗಣ್ಯರು ಭಾಗವಹಿಸಲಿದ್ದಾರೆ. ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ನಂತರ ಮುನಿರಾಬಾದ್ ನ ಶಾಲಾ ಆವರಣದಲ್ಲಿ ಬೃಹತ್ ಸಮಾರಂಭ ಜರುಗಲಿದೆ. ಅದಕ್ಕಾಗಿ ಈಗಾಗಲೇ ಸ್ಥಳ ಪರಿಶೀಲನೆ ನಡೆಸಲಾಗಿದೆ ಎಂದು ಡಿಸಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದರು.

ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭವನ್ನು ಅದ್ದೂರಿಯಾಗಿ ಮತ್ತು ಅಚ್ಚುಕಟ್ಟಾಗಿ ಆಯೋಜಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಈ ಕುರಿತು ಇತ್ತೀಚೆಗೆ ಬೆಂಗಳೂರಿನಲ್ಲಿ ಜರುಗಿದ ಅಧಿಕಾರಿಗಳ ಸಭೆಯಲ್ಲಿಇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಟ್ಟುನಿಟ್ಟಿನ ಆದೇಶ ನೀಡಿದ್ದು. ಒಟ್ಟಾರೆಯಾಗಿ ಸಮಾರಂಭವನ್ನು ಸ್ಮರಣೀಯವಾಗಿಸಲು ಸಿಎಂ ಸೂಚನೆ ನೀಡಿದ್ದಾರೆ. ಸಮಾರಂಭದಲ್ಲಿ ವಿಜಯನಗರ, ಬಳ್ಳಾರಿ, ಕೊಪ್ಪಳ



ಹಾಗೂ ರಾಯಚೂರು ಜಿಲ್ಲೆಗಳ ರೈತ ಮುಖಂಡರು, ರೈತರು ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ ಎಂದು ಡಿಸಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭ ಜೂ.25 ರಂದು ಅದ್ದೂರಿಯಾಗಿ ಜರುಗಲಿದೆ. ಸಮಾರಂಭದಲ್ಲಿ ಕರ್ನಾಟಕ ಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ. ಅದಕ್ಕಾಗಿ ಸಿದ್ದತಾ ಕಾರ್ಯಗಳು ಭರದಿಂದ ನಡೆಯುತ್ತಿವೆ.

ಕವಿತಾ ಎಸ್.ಮನ್ನಿಕೇರಿ
ಜಿಲ್ಲಾಧಿಕಾರಿಗಳು,
ವಿಜಯನಗರ.

## ಎಂಪಿ ತುಕಾರಾಂ ವಿರುದ್ದ ಬಳ್ಳಾರಿಯಲ್ಲಿ ಬಿಜೆಪಿ ಪ್ರತಿಭಟನೆ



**ಬಳ್ಳಾರಿ, ಜೂ.16:**ಲೋಕಸಭಾ ಸದಸ್ಯ ಈ. ತುಕಾರಾಂ ವಿರುದ್ಧ ಜಿಲ್ಲೆಯ ಬಿಜೆಪಿ ನಾಯಕರು ಸಿಡಿದೆದ್ದು ನಗರದ ಗಡಗಿ ಚೆನ್ನಪ್ಪ ವೃತ್ತದಲ್ಲಿ ಇಂದು ಮಾನವ ಸರಪಳಿ ರಚಿಸಿ ತುಕಾರಾಂ ಅವರ ಪ್ರತಿಕೃತಿ ಧಹಿಸಿ ಅಕ್ರೋಶ ವ್ಯಕ್ತಪಡಿಸದರು.

ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿ ಕಳಪೆ ಆಗಿದೆಂದು ಡಣಾಪುರ ಬಳಿ ವ್ಯಕ್ತಿಯೋರ್ವ ವೀಡಿಯೋ ಮಾಡಿ ಪ್ರಶ್ನೆ ಮಾಡಿದ್ದಕ್ಕಾಗಿ ಆತನಿಗೆ ಅಶ್ಲೀಲ ಪದ ಬಳಕೆ ಮಾಡಿ ಬೈದೊರುವುದನ್ನು ಖಂಡಿಸಿ ಈ ಪ್ರತಿಭಟನೆ ನಡೆಸಲಾಯ್ತು.

ಕಳಪೆ ಕಾಮಗಾರಿ ಬಗ್ಗೆ ಪ್ರಶ್ನೆ ಮಾಡಿ ವೀಡಿಯೋ ಮಾಡಿದ್ದ ಯುವಕನ ಬಗ್ಗೆ ಕಳ್ಳಮುಂಡೆ ಮಕ್ಕಳು ಏನೇನೂ ಮಾಡ್ತಾರೆ, ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದಿದ್ದರು. ಅಲ್ಲದೇ ವಿಡಿಯೋ ಮಾಡಿದ ಯುವಕನನ್ನು ಕರೆಸಿ ಬೈದಿದ್ದರಂತೆ ತುಕಾರಾಂ ಅವರು.ಅದಕ್ಕಾಗಿ ತುಕಾರಾಂ ವಿರುದ್ಧ ಘೋಷಣೆಕೂಗಿ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಮತ್ತು ಅವಾಚ್ಯ ಶಬ್ದ ಬಳಸಿದ ಅವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳುವಂತೆ ಆಗ್ರಹೊಸಲಾಯ್ತು.

ರಾಜ್ಯ ಬಿಜೆಪಿ ಕಾರ್ಯದರ್ಶಿ ಕೆ.ಎಸ್.ದಿವಾಕರ್,ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ದು, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಎಸ್. ಗುರುಲಿಂಗನಗೌಡ, ಡಾ.ಅರುಣಾ ಕಾಮಿನೇನಿ ಮೊದಲಾದವರು ಪಾಲ್ಗೊಂಡಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE